**<u>ಕರ್ನಾಟಕ ಸರ್ಕಾರದ ನಡವಳಿಗಳು</u>**

**ವಿಷಯ:-** ಹಿಂದುಳಿದ ವರ್ಗಗಳ ಮೊರಾರ್ಜಿ ದೇಸಾಯಿ ವಸತಿ ಶಾಲೆ, ನಿಪ್ಪಾಣಿ(ಗವಾನ), ಚಿಕ್ಕೋಡಿ ತಾಲ್ಲೂಕು, ಬೆಳಗಾವಿ ಜಿಲ್ಲೆ, ಈ ಶಾಲೆಯ ಖಾಸಗಿ ಕಟ್ಟಡಕ್ಕೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:-** ಪತ್ರ ಸಂಖ್ಯೆ:ಕವಶಿಸಸ/ಸಿಆರ್(ಶಿಕ್ಷಣ)-74/2008-09, ದಿ:22.10.2012.

*****

**<u>ಪ್ರಸ್ತಾವನೆ:</u>**

ಮೇಲೆ ಓದಲಾದ ಪತ್ರದಲ್ಲಿ 2008-09ನೇ ಸಾಲಿಗೆ ಮಂಜೂರಾದ ಹಿಂದುಳಿದ ವರ್ಗಗಳ ಮೊರಾರ್ಜಿ ದೇಸಾಯಿ ವಸತಿ ಶಾಲೆ, ನಿಪ್ಪಾಣಿ(ಗವಾನ), ಚಿಕ್ಕೋಡಿ ತಾಲ್ಲೂಕು, ಬೆಳಗಾವಿ ಜಿಲ್ಲೆ, ಈ ವಸತಿ ಶಾಲೆಗೆ ಸ್ವಂತ ಕಟ್ಟಡ ಲಭ್ಯವಿಲ್ಲದ ಕಾರಣ ಚಿಕ್ಕೋಡಿ ತಾಲ್ಲೂಕಿನ ಜತ್ರಾಟ ಗ್ರಾಮ ಪಂಚಾಯತ ವ್ಯಾಪ್ತಿಯ ಶ್ರೀ ಪುಷ್ಕರಾಜ.ಚ.ತಾರಳೆ, ಇವರ ಮಾಲೀಕತ್ವದ ವೀ.ಪಿ.ಸಿ. ನಂ.664ರ ಕಟ್ಟಡದಲ್ಲಿ ದಿನಾಂಕ:28.03.2011ರಿಂದ ನಡೆಸಲಾಗುತ್ತಿದ್ದು, ಸದರಿ ಬಾಡಿಗೆ ಕಟ್ಟಡಕ್ಕೆ ಲೋಕೋಪಯೋಗಿ ಇಲಾಖೆಯವರು ಮಾಹೆಯಾನ ರೂ.52,000/-(ಐವತ್ತೆರಡು ಸಾವಿರದ ರೂಪಾಯಿಗಳು ಮಾತ್ರ)ಗಳಿಗೆ ಮಾಸಿಕ ಬಾಡಿಗೆಯನ್ನು ನಿಗಧಿಪಡಿಸಿದ್ದು, ದಿನಾಂಕ:28.03.2011ರಿಂದ ಪಾವತಿಸಲು ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು. ಇವರು ಆಡಳಿತಾತ್ಮಕ ಅನುಮೋದನೆ ನೀಡುವಂತೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

**ಸರ್ಕಾರವು ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಿದೆ.**

**<u>ಸರ್ಕಾರಿ ಆದೇಶ ಸಂಖ್ಯೆ:ಸಕಇ 174 ಮೋದೇಶಾ 2012 ಬೆಂಗಳೂರು,</u>**
**<u>ದಿನಾಂಕ: -02-2013,</u>**

ಚಿಕ್ಕೋಡಿ ತಾಲ್ಲೂಕಿನ ಜತ್ರಾಟ ಗ್ರಾಮ ಪಂಚಾಯತ ವ್ಯಾಪ್ತಿಯ ಶ್ರೀ ಪುಷ್ಕರಾಜ.ಚ.ತಾರಳೆ, ಇವರ ಮಾಲೀಕತ್ವದ ಕಟ್ಟಡದಲ್ಲಿ ದಿನಾಂಕ:28.03.2011ರಿಂದ ನಡೆಸಲಾಗುತ್ತಿರುವ ಹಿಂದುಳಿದ ವರ್ಗಗಳ ಮೊರಾರ್ಜಿ ದೇಸಾಯಿ ವಸತಿ ಶಾಲೆ, ನಿಪ್ಪಾಣಿ(ಗವಾನ), ಚಿಕ್ಕೋಡಿ ತಾಲ್ಲೂಕು, ಬೆಳಗಾವಿ ಜಿಲ್ಲೆ, ಈ ವಸತಿ ಶಾಲೆಯ ಕಟ್ಟಡಕ್ಕೆ ಲೋಕೋಪಯೋಗಿ ಇಲಾಖೆಯವರು ಮಾಹೆಯಾನ ನಿಗಧಿಪಡಿಸಿದ ರೂ.52,000/-(ಐವತ್ತೆರಡು ಸಾವಿರದ ರೂಪಾಯಿಗಳು ಮಾತ್ರ)ಗಳಂತೆ ಬಾಡಿಗೆಯನ್ನು ದಿನಾಂಕ:28.03.2011ರಿಂದ ಅನ್ವಯಿಸುವಂತೆ ಹಾಗೂ TDS ಶೇ.10ರಷ್ಟು ಆದಾಯ ತೆರಿಗೆಯನ್ನು ನಿಯಮಾನುಸಾರ ಕೇಂದ್ರ ಸರ್ಕಾರದ ಲೆಕ್ಕಕ್ಕೆ ಜಮೆಗೊಳಿಸುವ ಷರತ್ತಿನೊಂದಿಗೆ ಕಟ್ಟಡದ ಮಾಲೀಕರಿಗೆ ಬಾಡಿಗೆ ಪಾವತಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂ:ಸಕಕಾ 34 ಆಂಆಸ 2013, ದಿನಾಂಕ:07.02.2013 ರಲ್ಲಿ ನೀಡಿರುವ ಸಹಮತಿ ಹಾಗೂ ಸರ್ಕಾರದ ಆದೇಶ ಸಂಖ್ಯೆ:ಎಫ್‌ಡಿ 1 ಟಿಎಫ್‌ಪಿ 1996 ದಿನಾಂಕ:10-07-1996ರಲ್ಲಿ ಸರ್ಕಾರದ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿದ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ವಿ.ರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

ಗೆ,

1. ಮಹಾಲೇಖಪಾಲರು,(ಎ ಮತ್ತು ಇ)(ಲೆಕ್ಕ ಪರಿಶೋಧನೆ-1) (ಲೆಕ್ಕಪರಿಶೋಧನೆ-2) ಕರ್ನಾಟಕ, ಬೆಂಗಳೂರು
2. ಜಿಲ್ಲಾಧಿಕಾರಿಗಳು, ಚಿಕ್ಕೋಡಿ ತಾಲ್ಲೂಕು, ಬೆಳಗಾವಿ ಜಿಲ್ಲೆ,
3. ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿಗಳು, ಚಿಕ್ಕೋಡಿ ತಾಲ್ಲೂಕು, ಬೆಳಗಾವಿ ಜಿಲ್ಲೆ,
4. ಕಾರ್ಯನಿರ್ವಾಹಕ ನಿರ್ದೇಶಕರು,ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು.
5. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
6. ಖಜಾನಾಧಿಕಾರಿಗಳು, ಚಿಕ್ಕೋಡಿ ತಾಲ್ಲೂಕು, ಬೆಳಗಾವಿ ಜಿಲ್ಲೆ,
7. ತಾಲ್ಲೂಕು ಸಮಾಜ ಕಲ್ಯಾಣ ಅಧಿಕಾರಿ, ಜಿಲ್ಲಾ ಅಧಿಕಾರಿ ಚಿಕ್ಕೋಡಿ ತಾಲ್ಲೂಕು, ಬೆಳಗಾವಿ ಜಿಲ್ಲೆ,
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.